## ಪ್ರಧಾನ ಸಿ.ಜೆ. ಮತ್ತು ಜೆ ಎಂಎಫ್‌ಸಿ ನ್ಯಾಯಾಲಯ, ಮದ್ದೂರು

| | | |
|---|---|---|
| ಸಾಕ್ಷಿಯ ಹೆಸರು | :- | ನಾಗರತ್ನ |
| ತಂದೆ/ ಗಂಡನ ಹೆಸರು | :- | ಚೆನ್ನಪ್ಪ |
| ವಯಸ್ಸು | :- | 52 ವರ್ಷ |
| ಉದ್ಯೋಗ | :- | ಶಿಕ್ಷಕರು |
| ವಾಸಸ್ಥಳ | :- | ಗೋಪಾಲಪುರ |

(ಸಾಕ್ಷಿಗೆ ದಿನಾಂಕಃ 03-11-2025 ರಂದು ಪ್ರಮಾಣ ವಚನ ಬೋಧಿಸಲಾಯಿತು)

ಮುಖ್ಯ ವಿಚಾರಣೆಃ- ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ಆರೋಪಿಯನ್ನು ನಾನು ಈ ಹಿಂದೆ ನೋಡಿಲ್ಲ. 2018 ರಲ್ಲಿ ಗೆಜ್ಜಲಗೆರೆ ಬಳಿ ಸುಮಾರು ಸಂಜೆ 05-30 ರಿಂದ 06-00 ಗಂಟೆ ಸಮಯದಲ್ಲಿ ನಾನು ಚನ್ನಪಟ್ಟಣದಿಂದ ಮಂಡ್ಯಕ್ಕೆ ಸರ್ಕಾರಿ ಬಸ್ಸನಲ್ಲಿ ಬರುತ್ತಿದ್ದಾಗ, ಅಪಘಾತವಾಗಿದ್ದು, ಬಸ್ಸಿನಲ್ಲಿ ನಾನು ಮಲಗಿದ್ದರಿಂದ ಯಾರಿಂದ ಹೇಗೆ ಅಪಘಾತವಾಗಿದೆ ಎಂದು ನನಗೆ ಗೊತ್ತಿಲ್ಲ. ಸದರಿ ಅಪಘಾತದಿಂದ ನನಗೆ ಮಂಡಿಗೆ ಏಟಾಗಿತ್ತು, ಬಸ್ಸಿನಲ್ಲಿ ಬೇರೆ ಯಾರಿಗೆ ಏನು ಏಟಾಗಿದೆ ಮತ್ತು ಎಷ್ಟು ಜನರಿಗೆ ಏಟಾಗಿದೆ ಎಂದು ನನಗೆ ಗೊತ್ತಿಲ್ಲ. ನಾನು ಪೊಲೀಸರಿಗೆ ಯಾವುದೇ ಹೇಳಿಕೆ ನೀಡಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಮಾನ್ಯ ಸ.ಸ.ಅ. ರವರು ಸಾಕ್ಷಿಯು ಅಭಿಯೋಜನೆಗೆ ವಿರುದ್ಧವಾಗಿ ಸಾಕ್ಷ್ಯ ನುಡಿದಿರುವುದರಿಂದ, ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಲು ಅನುಮತಿ ಕೋರಿರುತ್ತಾರೆ. ಸ.ಸ.ಅ ರವರ ಕೋರಿಕೆಯ ಮೇರೆಗೆ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು)

ಪಾಟೀ ಸವಾಲು ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ

ದಿಃ13-09-2018 ರಂದು ಠಾಣೆಗೆ ಹಾಜರಾಗಿ "ದಿಃ 12-09-2018 ರಂದು ---------- ಮತ್ತೇ ನೋಡಿದರೆ ಗುರುತಿಸುತ್ತೇನೆಂದು.” ಹೇಳಿಕೆ ನೀಡಿದ್ದೇನೆಂದರೆ ಸರಿಯಲ್ಲ. ಸದರಿ ನಿರಾಕರಣೆಯ ಭಾಗವನ್ನು ಸಂಪೂರ್ಣವಾಗಿ ಸಾಕ್ಷಿ ಗೆ ಓದಿ ಹೇಳಿದ್ದು ನಿರಾಕರಿಸಿದ ಮೇರೆಗೆ ಸದರಿ ಹೇಳಿಕೆಯ ಭಾಗವನ್ನು ನಿಪಿ-41 ಎಂದು ಗುರುತಿಸಲಾಯಿತು. ನಿಪಿ,41 ರಲ್ಲಿರುವ ಬರೆದಿರುವ ಎಲ್ಲಾ ವಿಚಾರ ವಿಚಾರ ನನಗೆ ಗೊತ್ತಿದ್ದರೂ ಕೂಡಾ ಆರೋಪಿಗೆ ಸಹಾಯ ಮಾಡಬೇಕೆಂದು ಸುಳ್ಳು ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಈಗ ನ್ಯಾಯಾಲಯದ ಮುಂದೆಯಿರುವ ಆರೋಪಿಯೇ ಸದರಿ ಅಪಘಾತಪಡಿಸಿದ್ದಾರೆಂದರೆ ನನಗೆ ಗೊತ್ತಿಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರು ಏನು ಇಲ್ಲವೆಂದು ಹೇಳಿರುತ್ತಾರೆ.**

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇ ಒ

(ಶ್ರೀಮತಿ ನಳಿನ ಎಸ್.ಸಿ.)
ಪ್ರಧಾನ ಸಿವಿಲ್ ನ್ಯಾಯಾಧೀಶರು,
ಮದ್ದೂರು